ಮೈಸೂರ ಗೆಜೆಟ್

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜನವರೀ ತಾ|| 15, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನ್‌ಮೆಂಟ್, ರೆಸಿಡೆಂಟರು, ಜೀಫ್ ಜಡ್ಜ್ಗೀರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನ್‌ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇಸ್‌ಮೆಂಟ್ ಯಾನೇ ಪರಾ ಬಗ್ಯೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಿರ್ಸ್,
ಕಾಂಪ್ಟ್ರೋಲರ್.

ಅಂಬಕೇ ಇಲಾಖಾ.

ನಂ. 528—275. ತಾರೀಖು 6ನೇ ಜನವರೀ 1887.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಯೆ ಪ್ರಕಟಿಸಲ್ಪಡುವದೇನಂದರೆ, ಮೈಸೂರ ಶ್ರೀಮ್ ಮಹಾರಾಜ ರಾಜಾಸಾಹೇಬ ಬಹದೂರವರ ದಿವಾರವರ ಅಪ್ಪಣೆ ಅನುಸರಿಸಿ ಚನ್ನಗಿರಿ ತಾಲ್ಲೂಕು ಹೊದಿಗೆರೆಯಲ್ಲಿ ಅಂಬಕೇ ಆಫೀಸ್ ಸ್ಥಾಪಿಸಲ್ಪಟ್ಟಿರುತ್ತೆ.

ಬಿ. ಮರಿಗಂಗಯ್ಯ,
ಅಂಬಕೇ ಬಕ್ಷಿ.